RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ– I | ಬೆಂಗಳೂರು, ಮಂಗಳವಾರ, ಜನವರಿ ೨೭, ೨೦೧೫ (ಮಾಘ ೦೭, ಶಕ ವರ್ಷ ೧೯೩೬) | ನಂ. ೯೦ |
|---|---|---|
| Part– I | Bangalore, Tuesday, January 27, 2015 (Magha 07, Shaka Varsha 1936) | No. 90 |

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

## ಸುತ್ತೋಲೆ

ಸಂಖ್ಯೆ: ಸಿಆಸುಇ 147 ಸೇಅನೇ 2014, ಬೆಂಗಳೂರು, ದಿನಾಂಕ: 27.01.2015

ವಿಷಯ: ಅನುಕಂಪದ ಆಧಾರದ ಮೇಲೆ ನೇಮಕಾತಿ– ಪಿ.ಯು.ಸಿ. ಕೋರ್ಸ್‌ನ ತತ್ಸಮಾನ ಕೋರ್ಸುಗಳ ಬಗ್ಗೆ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ: ಸಿಆಸುಇ 18 ಸೇವನೆ 2013 ದಿನಾಂಕ: 13.12.2013.

****

ಮೇಲೆ ಉಲ್ಲೇಖಿಸಿದ ದಿನಾಂಕ: 13.12.2013ರ ಅಧಿಸೂಚನೆಯಲ್ಲಿ ಕರ್ನಾಟಕ ಸಿವಿಲ್ ಸೇವಾ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು, 1978ರ ನಿಯಮ 4ಕ್ಕೆ ತಿದ್ದುಪಡಿ ಮಾಡಿ ಕಿರಿಯ ಸಹಾಯಕ/ ದ್ವಿತೀಯ ದರ್ಜೆ ಸಹಾಯಕರ ನೇರ ನೇಮಕಾತಿಗೆ "ಪದವಿಪೂರ್ವ ಶಿಕ್ಷಣ ಪರೀಕ್ಷೆ ಅಥವಾ ಅದರ ತತ್ಸಮಾನ ವಿದ್ಯಾರ್ಹತೆ" ಎಂದು ತಿದ್ದುಪಡಿ ಮಾಡಲಾಗಿದೆ. ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು, 1996ರನ್ವಯ ಕಿರಿಯ ಸಹಾಯಕರು/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಮಾಡುವ ನೇರ ನೇಮಕಾತಿಗಳಲ್ಲಿ ಪದವಿಪೂರ್ವ ಶಿಕ್ಷಣ ಪರೀಕ್ಷೆ (ಪಿ.ಯು.ಸಿ.)ಗೆ ತತ್ಸಮಾನವೆಂದು ಪರಿಗಣಿಸಬಹುದಾದ ವಿದ್ಯಾರ್ಹತೆ/ಕೋರ್ಸುಗಳು ಯಾವುವು ಎಂಬ ಬಗ್ಗೆ ಹಲವು ಇಲಾಖೆಗಳು ಸ್ಪಷ್ಟೀಕರಣವನ್ನು ಕೋರುತ್ತಿವೆ.

2) ಎಸ್.ಎಸ್.ಎಲ್.ಸಿ ನಂತರ ಪದವಿಪೂರ್ವ ಶಿಕ್ಷಣಕ್ಕೆ ಬದಲಾಗಿ ಐ.ಟಿ.ಐ ಮತ್ತು ಇತರೆ ಮೂರು ವರ್ಷದ ಡಿಪ್ಲೊಮಾ ಕೋರ್ಸನ್ನು ಪದವಿಪೂರ್ವ ಶಿಕ್ಷಣಕ್ಕೆ(ಪಿ.ಯು.ಸಿ.ಗೆ) ತತ್ಸಮಾನವೆಂದು ನೇಮಕಾತಿಯಲ್ಲಿ ಪರಿಗಣಿಸಬಹುದಾಗಿದೆ. ಮುಕ್ತ ವಿಶ್ವವಿದ್ಯಾಲಯಗಳು ನಡೆಸುವ 10+2 ಪರೀಕ್ಷೆಯನ್ನು ನೇಮಕಾತಿಗೆ ಪರಿಗಣಿಸಬಾರದೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

3) ಅನುಕಂಪದ ಆಧಾರದ ನೇಮಕಾತಿಯನ್ನು ಮಾಡಲು ಅಧಿಕಾರ ಹೊಂದಿರುವ ಎಲ್ಲಾ ಪ್ರಾಧಿಕಾರಗಳು ಈ ಅಂಶವನ್ನು ಗಮನದಲ್ಲಿಟ್ಟುಕೊಳ್ಳಬೇಕೆಂದು ಸೂಚಿಸಲಾಗಿದೆ.

**ಡಾ. ಮಂಗಳ. ಜಿ.ಎಸ್**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು–1)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ೩) (೨೦೦ ಪ್ರತಿಗಳು)